**ಪ್ರಾಸಾ-1**

**ಪ್ರಾಸಾ-1, ಶೈಲಾ ಹೆಬ್ಬಾಳ ರವರನ್ನು ದಿನಾಂಕಃ 30.06.2026 ರಂದು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

## ಮುಂದುವರೆದ ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರವರಿಂದಃ

**13. ಗುನ್ನಾ ಜಾಗಕ್ಕೆ ಸಂಬಂಧಪಟ್ಟಂತೆ ಕಂದಾಯ ಕಟ್ಟಿದ ಬಗ್ಗೆ ಒಟ್ಟು 9 ರಸೀದಿಗಳನ್ನು ಹಾಜರಪಡಿಸಿದ್ದು, ಅವುಗಳನ್ನು ಈಗ ನೋಡುತ್ತಿದ್ದು, ಅವುಗಳನ್ನು ಒಟ್ಟಾಗಿ ನಿಪಿ-2 ಎಂದು ಗುರುತಿಸಲಾಯಿತು.**

**14. ಘಟನಾ ಸ್ಥಳದ ನಕಾಶೆಯನ್ನು ಹಾಜರಪಡಿಸಿದ್ದು, ಅದನ್ನು ನಿಪಿ-3 ಎಂದು ಗುರುತಿಸಲಾಯಿತು.**

**15. ಗುನ್ನಾ ಜಾಗಕ್ಕೆ ಸಂಬಂಧಪಟ್ಟಂತೆ ಒಟ್ಟು 7 ಪಹಣಿ ಪತ್ರಿಕೆಗಳನ್ನು ಹಾಜರಪಡಿಸಿದ್ದು, ಅವುಗಳನ್ನು ಈಗ ನೋಡುತ್ತಿದ್ದು, ಸದರಿ 7 ಪಹಣಿ ಪತ್ರಿಕೆಗಳನ್ನು ಒಟ್ಟಾಗಿ ನಿಪಿ-4 ಎಂದು ಗುರುತಿಸಲಾಯಿತು.**

16. ಸಾಕ್ಷಿ ಮುಂದುವರೆದು, ಘಟನಾ ಸ್ಥಳದ ಸ್ವತ್ತು ನನ್ನ ಮಾವನ ತಂದೆಯ ಹೆಸರಿನಲ್ಲಿ ಇರುತ್ತದೆ ಎಂದು ಹೇಳುತ್ತಾರೆ.

17. ನ್ಯಾಯಾಲಯದ ಮುಂದೆ ಇರುವ 1 ರಿಂದ 3 ನೇ ಆರೋಪಿಗಳನ್ನು ಸಾಕ್ಷಿ ನೋಡಿ ಗುರುತಿಸುತ್ತಾರೆ. ಆರೋಪಿಗಳು ನಮ್ಮ ಜಾಗದಲ್ಲಿ ಗೋಡೌನ ಕಟ್ಟಿಕೊಂಡಿರುತ್ತಾರೆ. ನಾವು ಅದರ ಬಗ್ಗೆ ಪ್ರಶ್ನಿಸಲು ಹೋದಾಗ, ನಮ್ಮ ಮೇಲೆ ಜಗಳ ಮಾಡುತ್ತಾರೆ.

## ಪಾಟಿ ಸವಾಲುಃ ಶ್ರೀ ಎಂ.ಎಸ್. ದೊಡ್ಡಗೌಡರ, ಆರೋಪಿತರ ಪರ ವಕೀಲರಿಂದಃ

**(ವಕೀಲರು, ಪಾಟಿ ಸವಾಲಿಗೆ ಸಮಯ ಕೋರಿದ್ದು, ಪಾಟಿ ಸವಾಲನ್ನು ಮುಂದೂಡಲಾಯಿತು.)**

**(ತೆರೆದ ನ್ಯಾಯಾಲಯದಲ್ಲಿ, ನನ್ನ ಉಕ್ತ ಲೇಖನದಂತೆ, ಸಾಕ್ಷಿಯ ಸಾಕ್ಷವನ್ನು ಬೆರಳಚ್ಚು ಮಾಡಿಸಲಾಯಿತು.)**

**ಓ ಹೇ ಕೇ ಸರಿ ಅದೆ.**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಗದಗ**